# ಡೆಲಾವೇರ್‌ನ ವಿಲ್ಮಿಂಗ್ಟನ್‌ನಲ್ಲಿ ಯುಎಸ್‌ಎ ಅಧ್ಯಕ್ಷರೊಂದಿಗೆ ಪ್ರಧಾನಮಂತ್ರಿ ಭೇಟಿ

ಸೆಪ್ಟೆಂಬರ್ 21, 2024

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಡೆಲಾವೇರ್‌ನಲ್ಲಿ ನಡೆದ ಕ್ವಾಡ್ ಶೃಂಗಸಭೆಯ ನೇಪಥ್ಯದಲ್ಲಿ ಅಮೆರಿಕದ ಅಧ್ಯಕ್ಷ ಗೌರವಾನ್ವಿತ ಶ್ರೀ ಜೋಸೆಫ್ ಬೈಡೆನ್ ಅವರನ್ನು ಭೇಟಿ ಮಾಡಿದರು. ವಿಶೇಷ ಗೌರವವೆಂಬಂತೆ, ಅಧ್ಯಕ್ಷ ಬೈಡೆನ್ ಅವರು ವಿಲ್ಮಿಂಗ್ಟನ್‌ನಲ್ಲಿರುವ ತಮ್ಮ ನಿವಾಸದಲ್ಲೇ ಸಭೆಯನ್ನು ಆಯೋಜಿಸಿದ್ದರು.

2. ಭಾರತ-ಅಮೆರಿಕ ಪಾಲುದಾರಿಕೆಗೆ ಉತ್ತೇಜನ ನೀಡುವಲ್ಲಿ ಅಧ್ಯಕ್ಷ ಬೈಡೆನ್ ಅವರ ಸಾಟಿಯಿಲ್ಲದ ಕೊಡುಗೆಗಳಿಗೆ ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದರು. 2023ರ ಜೂನ್‌ನಲ್ಲಿ ತಾವು ಅಮೆರಿಕಕ್ಕೆ ನೀಡಿದ್ದ ಅಧಿಕೃತ ಭೇಟಿ ಮತ್ತು 2023ರ ಸೆಪ್ಟೆಂಬರ್‌ನಲ್ಲಿ ಜಿ-20 ನಾಯಕರ ಶೃಂಗಸಭೆಗಾಗಿ ಅಧ್ಯಕ್ಷ ಬೈಡೆನ್ ಅವರ ಭಾರತ ಭೇಟಿಯನ್ನೂ ಅವರು ಆತ್ಮೀಯವಾಗಿ ಸ್ಮರಿಸಿಕೊಂಡರು. ಈ ಭೇಟಿಗಳು ಭಾರತ-ಅಮೆರಿಕ ಪಾಲುದಾರಿಕೆಗೆ ಹೆಚ್ಚಿನ ಚಲನಶೀಲತೆ ಮತ್ತು ಆಳವನ್ನು ಒದಗಿಸಿದೆ ಎಂದು ಪ್ರಧಾನಿ ಹೇಳಿದರು.

3. ಭಾರತ ಮತ್ತು ಅಮೆರಿಕ ಇಂದು ಸಮಗ್ರ ಜಾಗತಿಕ ವ್ಯೂಹಾತ್ಮಕ ಪಾಲುದಾರಿಕೆಯನ್ನು ಹೊಂದಿವೆ. ಇದು ಹಂಚಿತ ಪ್ರಜಾಪ್ರಭುತ್ವ ಮೌಲ್ಯಗಳು, ಹಿತಾಸಕ್ತಿಗಳ ಸಂಯೋಜನೆ ಮತ್ತು ಜನರ ನಡುವಿನ ಉತ್ತಮ ಸಂಬಂಧಗಳಿಂದ ಪ್ರೇರಿತವಾದ ಮಾನವ ಪ್ರಯತ್ನದ ಎಲ್ಲಾ ಕ್ಷೇತ್ರಗಳನ್ನು ಒಳಗೊಂಡಿದೆ ಎಂದು ಪ್ರಧಾನಿ ಒತ್ತಿ ಹೇಳಿದರು.

4. ಉಭಯ ನಾಯಕರು ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಹೆಚ್ಚಿಸುವ ದಾರಿಗಳ ಬಗ್ಗೆ ಚರ್ಚಿಸಿದರು ಮತ್ತು ಇಂಡೋ-ಪೆಸಿಫಿಕ್ ಪ್ರದೇಶ ಮತ್ತು ಅದರಾಚೆಗಿನ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳ ಬಗ್ಗೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಅವರು ಉಭಯ ರಾಷ್ಟ್ರಗಳ ನಡುವಿನ ಬಾಂಧವ್ಯದ ಶಕ್ತಿ ಮತ್ತು ನಿರಂತರ ಸ್ಥಿತಿಸ್ಥಾಪಕತ್ವದ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದ್ದಲ್ಲದೆ, ಉಭಯ ದೇಶಗಳ ನಡುವಿನ ಮಾನವ ಪ್ರಯತ್ನದ ಎಲ್ಲಾ ಕ್ಷೇತ್ರಗಳ ಮೇಲೆ ಅದು ಬೀರುವ ಪ್ರಾಮುಖ್ಯತೆಯ ಕುರಿತಾದ ತಮ್ಮ ನಂಬಿಕೆಯನ್ನು ವ್ಯಕ್ತಪಡಿಸಿದರು.

**ವಿಲ್ಮಿಂಗ್ಟನ್, ಡೆಲಾವೇರ್**
**ಸೆಪ್ಟೆಂಬರ್ 21, 2024**